## ಕರ್ನಾಟಕ ಸರ್ಕಾರ

ಸಂಖ್ಯೆ:AGRI-AML/141/2021

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು. ದಿ:10-12-2021

## ಮಾರ್ಪಾಡು ಆದೇಶ

ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸಲು ಹೊಸ ಶಿಷ್ಯವೇತನ ಯೋಜನೆಯಾದ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಯೋಜನೆಯನ್ನು ರಾಜ್ಯದಲ್ಲಿ ಪ್ರಸಕ್ತ ಸಾಲಿನಿಂದ ಜಾರಿಗೊಳಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ದಿನಾಂಕ:07-08-2021ರಲ್ಲಿ ಹೊರಡಿಸಿರುವ ಆದೇಶ ಭಾಗದಲ್ಲಿನ ಷರತ್ತುಗಳನ್ನು ಈ ಕೆಳಕಂಡಂತೆ ಮಾರ್ಪಡಿಸಲಾಗಿದೆ.

| ಕ್ರ.ಸಂ | ಷರತ್ತುಗಳು | ಮಾರ್ಪಾಡಿತ ಷರತ್ತುಗಳು |
|---|---|---|
| i) | ರೈತರ ಮಕ್ಕಳು, ಕರ್ನಾಟಕ ರಾಜ್ಯದ ಅನುದಾನದಿಂದ ಪಾವತಿಸುವಂತಹ ಒಂದು ವಿದ್ಯಾರ್ಥಿ ವೇತನಕ್ಕೆ ಮಾತ್ರ ಅರ್ಹರಿರುತ್ತಾರೆ. ಆದರೆ, ಮೆರಿಟ್, ಅರ್ಹತಾ ಪರೀಕ್ಷೆ, ಶೈಕ್ಷಣಿಕ ಪರೀಕ್ಷೆಗಳಲ್ಲಿ ರಾಂಕ್ ಇತ್ಯಾದಿಗಳ ಆಧಾರದ ಮೇಲೆ ಶಿಷ್ಯ ವೇತನ/ ಪ್ರಶಸ್ತಿ/ ಪ್ರತಿಫಲ ಇವುಗಳನ್ನು ರೈತರ ಮಕ್ಕಳು ಪಡೆದಿದ್ದರೂ ಈ ಶಿಷ್ಯವೇತನವನ್ನು ಪಡೆಯಲು ಅರ್ಹರಿರುತ್ತಾರೆ. | ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು. |
| ii) | ರೈತರ ಮಕ್ಕಳ ತಂದೆ-ತಾಯಿ ಇಬ್ಬರೂ ಕೃಷಿ ಜಮೀನಿನ ಒಡೆಯರಾಗಿದ್ದರೆ, ಈ ಯೋಜನೆಯಲ್ಲಿ ಒಂದು ಶಿಷ್ಯವೇತನಕ್ಕೆ ಮಾತ್ರ ರೈತರ ಮಕ್ಕಳು ಅರ್ಹರಾಗಿರುತ್ತಾರೆ. | ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ ಪಡೆಯುತ್ತಿದ್ದರೂ 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗುತ್ತಾರೆ. |
| iii) | ಈ ಶಿಷ್ಯವೇತನವು ಶಿಕ್ಷಣದ ಯಾವುದೇ ಕೋರ್ಸಿನ ಸೆಮಿಸ್ಟರ್ / ಶೈಕ್ಷಣಿಕ ವರ್ಷಗಳಿಗೆ ಮಿತಿಯಾಗಿರತಕ್ಕದ್ದು. ಕೋರ್ಸ್ನ ಸೆಮಿಸ್ಟರ್ | 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನವನ್ನು ವಿತರಿಸುವ ಉದ್ದೇಶಕ್ಕೆ ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ |

...2/-

| | | |
|---|---|---|
| | ನಲ್ಲಿ / ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣ ಹೊಂದಿ ಪುನ: ಆ ಸೆಮಿಸ್ಟರ್ / ಶೈಕ್ಷಣಿಕ ವರ್ಷದಲ್ಲಿ ವಿದ್ಯಾಭ್ಯಾಸದ ಪುನರಾವರ್ತನೆಯಾದರೆ (ಪುನ: ಪರೀಕ್ಷೆ ತೆಗೆದುಕೊಂಡರೆ) ವಿದ್ಯಾರ್ಥಿಗಳು ಶಿಷ್ಯ ವೇತನವನ್ನು ಪಡೆಯಲು ಅರ್ಹರಾಗಿರುವುದಿಲ್ಲ. | ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (On entitlement basis) ವಿದ್ಯಾರ್ಥಿ ವೇತನವನ್ನು ವಿತರಿಸುವುದು ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ ವೇತನವನ್ನು ನೇರ ನಗದು ವರ್ಗಾವಣೆ (Direct Benefit Transfer) ಮೂಲಕ ವರ್ಗಾಯಿಸುವುದು. |
| iv) | ಈ ಶಿಷ್ಯವೇತನವನ್ನು ಯಾವುದಾದರೂ ಒಂದು ವಿಧದ ಕೋರ್ಸಗೆ ನೀಡಲಾಗುವುದು. ಉದಾರಣೆಗೆ X ಎಂಬ ಸ್ನಾತಕೋತ್ತರ ಪದವಿಯನ್ನು ಪೂರೈಸಿದ ನಂತರ Y ಎಂಬ ಸ್ನಾತಕೋತ್ತರ ಕೋರ್ಸಗೆ ವಿದ್ಯಾರ್ಥಿಯು ಪ್ರವೇಶ ಪಡೆದಲ್ಲಿ, ಈ ಕೋರ್ಸಗೆ ಶಿಷ್ಯವೇತನವನ್ನುಪಡೆಯಲು ಅರ್ಹವಾಗುವುದಿಲ್ಲ. | ಯಾವುದೇ ಮಾರ್ಪಾಡು ಇರುವುದಿಲ್ಲ. |

(ಮಾನ್ಯ ಮುಖ್ಯಮಂತ್ರಿಯವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

P. Sati 10/12/2021

**(ಪಿ. ಸತ್ಯಭಾಮ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಇದನ್ನು ಇ-ವಿಶೇಷ ಗೆಜೆಟ್ ನಲ್ಲಿ ಹೊರಡಿಸಲು ಕೋರಿದೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು,ಕರ್ನಾಟಕ ವೃತ್ತ, ಬೆಂಗಳೂರು.

2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
5. ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿಗಳು/ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಸರ್ಕಾರದ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಕುಲಪತಿಗಳು, ರಾಜ್ಯದ ಎಲ್ಲಾ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳು/ ಕೃಷಿ ಪೂರಕ ವಿಜ್ಞಾನಗಳ ವಿಶ್ವವಿದ್ಯಾಲಯಗಳು.
9. ಕೃಷಿ ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
10. ಕೃಷಿ ನಿದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳು,
12. ಎಲ್ಲಾ ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು.
13. ಯೋಜನಾ ನಿರ್ದೇಶಕರು, ನೇರ ನಗದು ವರ್ಗಾವಣೆ ಕೋಶ (Direct Benefit Tranfer -DBT Cell), ಸಿಆಸುಇ (ಇ-ಆಡಳಿತ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
14. ಶಾಖಾರಕ್ಷಾ ಕಡತ/ ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಬಹುಮಹಡಿ ಕಟ್ಟಡ.
4. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಶಾಖೆ, ಕೃಷಿ ಇಲಾಖೆ.